**Akashvani: Bangalore**
**National Bulletin in Kannada**
**06.12.2025 : 7.35AM**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**06.12.2025 : 7.35AM**
******

**ಮುಖ್ಯಾಂಶಗಳು:**

1. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹಾಗೂ ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ; ಯಶಸ್ವಿ ಪ್ರವಾಸದ ನಂತರ ಸ್ವದೇಶಕ್ಕೆ ತೆರಳಿದ ರಷ್ಯಾ ನಿಯೋಗ
2. ಉಕ್ರೇನ್‌ನಲ್ಲಿ ಶಾಂತಿ ಸ್ಥಾಪನೆ ಹಾಗೂ ಶಾಶ್ವತ ಪರಿಹಾರ ಅಗತ್ಯ - ಪ್ರಧಾನಿ ನರೇಂದ್ರ ಮೋದಿ
3. ವಿಮಾನ ಹಾರಾಟ ವ್ಯತ್ಯಯ ಸರಿಪಡಿಸಲು ಸಮಿತಿ ರಚನೆ; ಹೆಚ್ಚುವರಿ ರೈಲು ಸಂಚಾರಕ್ಕೆ ಕ್ರಮ
4. ಇಂದು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ೭೦ನೇ  ಮಹಾ ಪರಿನಿರ್ವಾಣ ದಿನ; ದೇಶಾದ್ಯಂತ ಕಾರ್ಯಕ್ರಮ
5. ಏಕದಿನ ಕ್ರಿಕೆಟ್; ಮೂರನೇ ಪಂದ್ಯದಲ್ಲಿ ಇಂದು ಭಾರತ-ದಕ್ಷಿಣ ಆಫ್ರಿಕಾ ಮುಖಾಮುಖಿ

********

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ನಿನ್ನೆ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾದರು. ಪುಟಿನ್ ಅವರಿಗೆ ಆಯೋಜಿಸಿದ್ದ ಔತಣಕೂಟದಲ್ಲಿ ಪಾಲ್ಗೊಂಡು ರಾಷ್ಟ್ರಪತಿ ಅವರೊಂದಿಗೆ ಸಮಾಲೋಚನೆ ನಡೆಸಿದರು. ಈ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ, ರಷ್ಯಾದ ಉನ್ನತ ಮಟ್ಟದ ನಿಯೋಗದ ಸದಸ್ಯರು ಭಾಗವಹಿಸಿದ್ದರು. ಎರಡು ದಿನಗಳ ಯಶಸ್ವಿ ಪ್ರವಾಸದ ನಂತರ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಸ್ವದೇಶಕ್ಕೆ ವಾಪಸ್ಸಾದರು. ಅವರನ್ನು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಮತ್ತಿತರ ಗಣ್ಯರು ಆತ್ಮೀಯವಾಗಿ ಬೀಳ್ಕೊಟ್ಟರು.

********

ರಕ್ಷಣೆ, ವ್ಯಾಪಾರ, ಆರ್ಥಿಕತೆ, ಆರೋಗ್ಯ, ಶಿಕ್ಷಣ, ಸಂಸ್ಕೃತಿ ಮತ್ತು ಮಾಧ್ಯಮಕ್ಕೆ ಸಂಬಂಧಿಸಿದ ೧೬ ಒಪ್ಪಂದಗಳನ್ನು ಭಾರತ ಮತ್ತು ರಷ್ಯಾ ವಿನಿಮಯ ಮಾಡಿಕೊಂಡಿವೆ. ನವದೆಹಲಿಯಲ್ಲಿ ನಿನ್ನೆ ನಡೆದ ೨೩ನೇ ಭಾರತ-ರಷ್ಯಾ ವಾರ್ಷಿಕ ಶೃಂಗಸಭೆಯಲ್ಲಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ಜಂಟಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ-ರಷ್ಯಾ ಸ್ನೇಹವು ಜಾಗತಿಕ ಸವಾಲುಗಳನ್ನು ಎದುರಿಸಲು ಶಕ್ತಿ ನೀಡುತ್ತದೆ. ಈ ವಿಶ್ವಾಸವು ಎರಡೂ ರಾಷ್ಟ್ರಗಳ ಹಂಚಿಕೆಯ ಭವಿಷ್ಯವನ್ನು ಶ್ರೀಮಂತಗೊಳಿಸುತ್ತದೆ ಎಂದು ಹೇಳಿದರು. ಭಯೋತ್ಪಾದನೆ ವಿರುದ್ಧದ

ಹೋರಾಟದಲ್ಲಿ ಭಾರತ ಮತ್ತು ರಷ್ಯಾ ಒಟ್ಟಾಗಿ ನಿಂತಿವೆ. ಭಯೋತ್ಪಾದನೆಯು ಮಾನವೀಯ ಮೌಲ್ಯಗಳ ಮೇಲಿನ ನೇರ ದಾಳಿಯಾಗಿದೆ. ಭಯೋತ್ಪಾದನೆಯ ವಿರುದ್ಧ ಜಾಗತಿಕ ಏಕತೆಯೇ ದೊಡ್ಡ ಶಕ್ತಿಯಾಗಿದೆ ಎಂದು ಪ್ರತಿಪಾದಿಸಿದರು. ಉಕ್ರೇನ್ ವಿಷಯದಲ್ಲಿ ಭಾರತವು ಮೊದಲಿನಿಂದಲೂ ಶಾಂತಿಯನ್ನು ಪ್ರತಿಪಾದಿಸುತ್ತಿದೆ. ಈ ನಿಟ್ಟಿನಲ್ಲಿ ಶಾಂತಿಯುತ ಮತ್ತು ಶಾಶ್ವತ ಪರಿಹಾರಕ್ಕಾಗಿ ಮಾಡಲಾಗುತ್ತಿರುವ ಎಲ್ಲಾ ಪ್ರಯತ್ನಗಳನ್ನು ಭಾರತ ಸ್ವಾಗತಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

********

ದ್ವಿಪಕ್ಷೀಯ ವ್ಯಾಪಾರದ ಅಡೆತಡೆ ಇಲ್ಲದ ನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ರಾಷ್ಟ್ರೀಯ ಕರೆನ್ಸಿಗಳ ಬಳಕೆಯ ಮೂಲಕ ದ್ವಿಪಕ್ಷೀಯ ವಸಹಾತು ವ್ಯವಸ್ಥೆ ಜಂಟಿಯಾಗಿ ಅಭಿವೃದ್ಧಿಪಡಿಸುವುದನ್ನು ಭಾರತ ಮತ್ತು ರಷ್ಯಾ ಒಪ್ಪಿಕೊಂಡಿವೆ. ೨೩ನೇ ಭಾರತ-ರಷ್ಯಾ ಶೃಂಗಸಭೆಯ ನಂತರ ಜಂಟಿ ಹೇಳಿಕೆಯಲ್ಲಿ ಈ ವಿಷಯವನ್ನು ತಿಳಿಸಲಾಗಿದೆ. ರಾಷ್ಟ್ರೀಯ ಪಾವತಿ ವ್ಯವಸ್ಥೆ ಹಣಕಾಸು ಸಂದೇಶ ವ್ಯವಸ್ಥೆ ಮತ್ತು ಕೇಂದ್ರ ಬ್ಯಾಂಕ್ ಡಿಜಿಟಲ್ ಕರೆನ್ಸಿ ವೇದಿಕೆಗಳ ಪರಸ್ಪರ ಕಾರ್ಯ ಸಾಧ್ಯತೆಯನ್ನು ಸಕ್ರಿಯಗೊಳಿಸುವ ಕುರಿತು ಎರಡೂ ಕಡೆಯವರು ತಮ್ಮ ಚರ್ಚೆಗಳನ್ನು ಮುಂದುವರಿಸಲು ಒಪ್ಪಿಕೊಂಡಿದ್ದಾರೆ.

********

ಇಂಡಿಗೋ ವಿಮಾನಗಳ ಹಾರಾಟ ವ್ಯತ್ಯಯವನ್ನು ಸರಿಪಡಿಸಲು ಕೇಂದ್ರ ಸರ್ಕಾರ ನಾಲ್ವರ ಸಮಿತಿ ರಚನೆ ಮಾಡಿದೆ. ೧೫ ದಿನಗಳಲ್ಲಿ ಪರಾಮರ್ಶೆ ನಡೆಸಿ, ವರದಿ ನೀಡುವಂತೆ ಕೇಂದ್ರ ನಾಗರಿಕ ವಿಮಾನಯಾನ ಸಚಿವಾಲಯ ನಿರ್ದೇಶನ ನೀಡಿದೆ. ವಿಮಾನಗಳ ಹಾರಾಟದಲ್ಲಿ ವ್ಯತ್ಯಯ ಉಂಟಾಗಲು ಕಾರಣ ಏನು ಹಾಗೂ ಸಿಬ್ಬಂದಿ ಸಹಕಾರ, ಕಾರ್ಯ ನಿರ್ವಹಣೆ ಮತ್ತಿತರ ಅಂಶಗಳ ಬಗ್ಗೆಯೂ ಪರಿಶೀಲಿಸಿ ವರದಿ ನೀಡುವಂತೆ ಆದೇಶಿಸಿದೆ.

********

ದೇಶದಲ್ಲಿ ವಿಮಾನಗಳ ಹಾರಾಟ ಅಸ್ತವ್ಯಸ್ತವಾದ ಹಿನ್ನೆಲೆಯಲ್ಲಿ ರೈಲ್ವೆ ಸಚಿವಾಲಯ ಹೆಚ್ಚುವರಿ ರೈಲು ಸಂಚಾರಕ್ಕೆ ವ್ಯವಸ್ಥೆ ಮಾಡಿದೆ. ಪ್ರಯಾಣಿಕರಿಗೆ ಸೂಕ್ತ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ೩೭ ವಿಶೇಷ ರೈಲುಗಳ ಸಂಚಾರ ಆರಂಭಿಸಿದೆ. ಹೆಚ್ಚುವರಿಯಾಗಿ ೧೧೬ ಕೋಚ್‌ಗಳು, ಸ್ಲೀಪರ್ ಕೋಚ್‌ಗಳನ್ನು ಸಹ ಅಳವಡಿಸಿ, ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡುತ್ತಿದೆ.

********

ಇಂದು ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ೭೦ನೇ ಮಹಾ ಪರಿನಿರ್ವಾಣ ದಿನ. ದೇಶಾದ್ಯಂತ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಿದ್ದು, ರಾಷ್ಟ್ರ ನಿರ್ಮಾಣದಲ್ಲಿ ಅಂಬೇಡ್ಕರ್ ಕೊಡುಗೆಯನ್ನು ಸ್ಮರಿಸಲಾಗುತ್ತಿದೆ. ಸಂಸತ್ತಿನ ಪ್ರೇರಣಾ ಸ್ಥಳದಲ್ಲಿ ಭಾರತರತ್ನ ಡಾ. ಅಂಬೇಡ್ಕರ್

ಅವರಿಗೆ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಮತ್ತಿತರ ಗಣ್ಯರು ಗೌರವ ನಮನ ಸಲ್ಲಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಪರವಾಗಿ ಡಾ. ಅಂಬೇಡ್ಕರ್ ಪ್ರತಿಷ್ಠಾನ ಪ್ರತಿ ವರ್ಷ ಮಹಾ ಪರಿನಿರ್ವಾಣ ದಿನವನ್ನು ಆಚರಿಸುತ್ತಿದೆ.

********

ಪ್ರಾಣಿಗಳ ಮೇಲಿನ ದೌರ್ಜನ್ಯ ತಡೆ ಖಾಸಗಿ ತಿದ್ದುಪಡಿ ವಿಧೇಯಕಕ್ಕೆ ರಾಜ್ಯಸಭೆಯಲ್ಲಿ ಅಂಗೀಕಾರ ದೊರೆಯಿತು. ಸದಸ್ಯರಾದ ಸುಧಾಮೂರ್ತಿ ಈ ವಿಧೇಯಕದ ಮೇಲೆ ಚರ್ಚೆ ನಡೆಸಿದರು. ಇದೇ ವೇಳೆ, ಮೋಟಾರು ವಾಹನ ತಿದ್ದುಪಡಿ ವಿಧೇಯಕ, ಸಂವಿಧಾನದ ೧೯ನೇ ಪರಿಚ್ಛೇದ ತಿದ್ದುಪಡಿ ವಿಧೇಯಕ, ಮಹಿಳೆಯರ ಮೇಲಿನ ದೌರ್ಜನ್ಯ ತಡೆ ವಿಧೇಯಕ, ಮಕ್ಕಳಿಗೆ ಕಡ್ಡಾಯ ಉಚಿತ ಶಿಕ್ಷಣ ತಿದ್ದುಪಡಿ ವಿಧೇಯಕ, ಕ್ರಿಮಿನಲ್ ಕಾನೂನುಗಳು ತಿದ್ದುಪಡಿ ವಿಧೇಯಕ ೨೦೨೪, ಜನತಾ ಪ್ರಾತಿನಿಧ್ಯ ತಿದ್ದುಪಡಿ ವಿಧೇಯಕ ೨೦೨೪, ಉಚಿತ ಕ್ಯಾನ್ಸರ್ ಚಿಕಿತ್ಸೆಯ ಹಕ್ಕು ವಿಧೇಯಕ ಸೇರಿದಂತೆ ಹಲವು ಖಾಸಗಿ ವಿಧೇಯಕಗಳಿಗೂ ಅಂಗೀಕಾರ ದೊರೆಯಿತು. ಬಳಿಕ ನಡೆದ ಪ್ರಶ್ನೋತ್ತರ ಕಲಾಪದಲ್ಲಿ, ಕೃಷಿ ಕ್ಷೇತ್ರದಲ್ಲಿ ಗರಿಷ್ಠ ಬೆಂಬಲ ಬೆಲೆ ಕುರಿತು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್  ಉತ್ತರಿಸಿ, ರೈತರ ಕಲ್ಯಾಣವು ಕೇಂದ್ರ ಸರ್ಕಾರದ ಅತ್ಯುನ್ನತ ಆದ್ಯತೆಯಾಗಿದೆ ಎಂದರು. ಕೃಷಿಯು ಭಾರತೀಯ ಆರ್ಥಿಕತೆಯ ಬೆನ್ನೆಲುಬು. ಆದ್ದರಿಂದ ಉತ್ಪಾದನೆಯನ್ನು ಹೆಚ್ಚಿಸುವುದು, ವೆಚ್ಚವನ್ನು ಕಡಿಮೆ ಮಾಡುವುದು ಮತ್ತು ಉತ್ಪನ್ನಗಳಿಗೆ ನ್ಯಾಯಯುತ ಬೆಲೆಯನ್ನು ಖಚಿತಪಡಿಸುವುದು ಈ ಮೂರು ಕಾರ್ಯಗಳನ್ನು ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಸಾಧಿಸಿದೆ ಎಂದು ಅವರು ಹೇಳಿದರು. ಬಳಿಕ ಕಲಾಪವನ್ನು ಸೋಮವಾರಕ್ಕೆ ಮುಂದೂಡಲಾಗಿದೆ.

********

೨೦೩೦ರಲ್ಲಿ ವಿಶ್ವದ ಸಾವಯವ ಉತ್ಪನ್ನಗಳಲ್ಲಿ ಭಾರತದ ಪಾಲು ಶೇಕಡಾ ೨೦ ರಷ್ಟು ಹಾಗೂ ೨೦೩೫ ರಲ್ಲಿ ಶೇಕಡಾ ೪೦ ರಷ್ಟು ಇರುವ ಗುರಿ ಹೊಂದಲಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಹೇಳಿದ್ದಾರೆ. ಗುಜರಾತಿನ ಗಾಂಧಿನಗರದಲ್ಲಿ ನಡೆದ ನಬಾರ್ಡ್-|ಂಬಂ| ಭೂ ಶೃಂಗಸಭೆ ೨೦೨೫ರ ಉದ್ಘಾಟನಾ ಅಧಿವೇಶನದಲ್ಲಿ ಸಚಿವರು ಮಾತನಾಡಿ, ಇದಾಗಲೇ ಭಾರತದಲ್ಲಿ ೩೫ ಲಕ್ಷಕ್ಕೂ ಅಧಿಕ ಕೃಷಿಕರು ನೈಸರ್ಗಿಕ ಕೃಷಿಯನ್ನು ಅಳವಡಿಸಿಕೊಂಡಿದ್ದಾರೆ. ಇದರಿಂದಾಗಿ ಇನ್ನು ಕೆಲವೇ ವರ್ಷಗಳಲ್ಲಿ ಭಾರತೀಯರು ವಿಷಮುಕ್ತ ಆಹಾರವನ್ನು ಸೇವನೆ ಮಾಡಲಿದ್ದಾರೆ ಎಂದರು. ಭಾರತ್ ಸಾವಯವ ಕೇಂದ್ರ ಮತ್ತು ಅಮೂಲ್ ಕೇಂದ್ರಗಳ ಮೂಲಕ ಇದಾಗಲೇ ಸಾವಯವ ಉತ್ಪನ್ನಗಳ ಮಾರುಕಟ್ಟೆ ಆರಂಭಿಸಲಾಗಿದೆ. ಅಂತರರಾಷ್ಟ್ರೀಯ ಮಟ್ಟದಲ್ಲಿ ಇದನ್ನು ಕೊಂಡೊಯ್ಯುವ ಗುರಿ ಇದೆ. ಇದಾಗಲೇ ೪೦ ಕ್ಕೂ ಅಧಿಕ ಸಾವಯವ ಉತ್ಪನ್ನಗಳು

ಆನ್‌ಲೈನ್‌ನಲ್ಲಿಯೂ ಲಭ್ಯವಿದೆ ಎಂದರು. ಸಹಕಾರಿ ಕ್ಷೇತ್ರದ ವ್ಯಾಪ್ತಿಯನ್ನು ವಿಸ್ತರಿಸಲು ಸರ್ಕಾರ ನಿರಂತರವಾಗಿ ಶ್ರಮಿಸುತ್ತಿದೆ ಮತ್ತು ಶೀಘ್ರದಲ್ಲೇ ದೇಶಾದ್ಯಂತ ಸಹಕಾರಿ ಟ್ಯಾಕ್ಸಿ, ಸಹಕಾರಿ ವಿಮೆ ಮತ್ತು ಸಹಕಾರಿ ಸಂಘಗಳ ಯೋಜನೆಯಂತಹ ಉಪಕ್ರಮಗಳನ್ನು ಪ್ರಾರಂಭಿಸಲಿದೆ. ಗ್ರಾಮೀಣ ಆರ್ಥಿಕತೆಗಳನ್ನು ಬಲಪಡಿಸದೆ ವಿಕಸಿತ ಭಾರತದ ಕನಸು ನನಸಾಗಲು ಸಾಧ್ಯವಿಲ್ಲ ಎಂದ ಅವರು, ಸಹಕಾರಿ ಕ್ಷೇತ್ರದ ಬೆಳವಣಿಗೆ ಸ್ವಯಂಚಾಲಿತವಾಗಿ ಗ್ರಾಮೀಣ ಮತ್ತು ಕೃಷಿ ಅಭಿವೃದ್ಧಿಯನ್ನು ಖಚಿತಪಡಿಸುತ್ತದೆ ಎಂದು ತಿಳಿಸಿದರು.

********

ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ನಾಗರಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿ ದೆಹಲಿಯಲ್ಲಿ ನಿನ್ನೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರನ್ನು ಭೇಟಿಮಾಡಿ ಸಮಾಲೋಚಿಸಿದರು. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಧಾರವಾಡ ಲೋಕಸಭಾ ಕ್ಷೇತ್ರದಲ್ಲಿರುವ ಕೇಂದ್ರೀಯ ವಿದ್ಯಾಲಯ ಮತ್ತು ನವೋದಯ ವಿದ್ಯಾಲಯಗಳಿಗೆ ಹೆಚ್ಚಿನ ಮೂಲಭೂತ ಸೌಕರ್ಯ ಹಾಗೂ ವಿಶ್ವವಿದ್ಯಾಲಯಗಳ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳು ಸೇರಿದಂತೆ ಹಲವು ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆಸಲಾಯಿತು ಎಂದು ತಿಳಿಸಿದ್ದಾರೆ. ಪ್ರಮುಖ ಅಗತ್ಯಗಳನ್ನು ಪರಿಹರಿಸಲು ಮತ್ತು ಅಭಿವೃದ್ಧಿ ಕಾರ್ಯಗಳ ನಿರಂತರ ಪ್ರಗತಿಗೆ ಅಗತ್ಯ ಬೆಂಬಲ ನೀಡುವುದಾಗಿ ಭರವಸೆ ನೀಡಿದ್ದಾರೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ.

********

ಹಿಂಸಾಚಾರದಿಂದ ಬಾಧಿತರಾದ ಮತ್ತು ಸಂಕಷ್ಟದಲ್ಲಿರುವ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಕಾನೂನು ಬೆಂಬಲ ಮತ್ತು ಸಹಾಯವನ್ನು ಒದಗಿಸಲು ದೇಶಾದ್ಯಂತ ಒಟ್ಟು ೮೬೪ ಒನ್ ಸ್ಟಾಪ್ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ರಾಜ್ಯ ಸಚಿವೆ ಸಾವಿತ್ರಿ ಠಾಕೂರ್ ಲೋಕಸಭೆಯಲ್ಲಿ ನಿನ್ನೆ ತಿಳಿಸಿದ್ದಾರೆ. ಲಿಖಿತ ಉತ್ತರದಲ್ಲಿ ಅವರು, ಅಗತ್ಯವಿರುವ ಮಹಿಳೆಯರಿಗೆ ವೈದ್ಯಕೀಯ ನೆರವು, ತಾತ್ಕಾಲಿಕ ಆಶ್ರಯ, ಪೊಲೀಸ್ ನೆರವು ಮತ್ತು ಮಾನಸಿಕ-ಸಾಮಾಜಿಕ ಸಮಾಲೋಚನೆಯಂತಹ ಸೇವೆಗಳನ್ನು ಸಹ ಒದಗಿಸುತ್ತದೆ ಎಂದರು. ಈ ಕೇಂದ್ರಗಳು ೨೦೧೫ ರಲ್ಲಿ ಪ್ರಾರಂಭವಾಗಿದ್ದು, ಅಲ್ಲಿಂದ ಈವರೆಗೆ ದೇಶದಲ್ಲಿ ೧೨ ಲಕ್ಷ ೬೭ ಸಾವಿರಕ್ಕೂ ಹೆಚ್ಚು ಮಹಿಳೆಯರಿಗೆ ಸಹಾಯ ಮಾಡಲಾಗಿದೆ. ರಾಜ್ಯ ಸರ್ಕಾರಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಆಡಳಿತಗಳ ಜೊತೆಗೆ, ಸಚಿವಾಲಯವು ಮಹಿಳೆಯರಿಗೆ ಗುಣಮಟ್ಟದ ಬೆಂಬಲವನ್ನು ಖಚಿತಪಡಿಸಿಕೊಳ್ಳಲು ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಅವರು ಮಾಹಿತಿ ನೀಡಿದರು.

********

ವಿಶಾಖಪಟ್ಟಣಂನಲ್ಲಿಂದು ಭಾರತ - ದಕ್ಷಿಣ ಆಫ್ರಿಕಾ ತಂಡಗಳು ಏಕದಿನ ಕ್ರಿಕೆಟ್ ಪಂದ್ಯದಲ್ಲಿ ಮುಖಾಮುಖಿಯಾಗಲಿವೆ. ಪಂದ್ಯ ಇಂದು ಮಧ್ಯಾಹ್ನ ೧.೩೦ಕ್ಕೆ ಆರಂಭವಾಗಲಿದೆ. ಉಭಯ ತಂಡಗಳು

ತಲಾ ಒಂದೊಂದು ಪಂದ್ಯದಲ್ಲಿ ಗೆದ್ದು, ಸಮಬಲ ಸಾಧಿಸಿದ್ದು, ಇಂದಿನ ಪಂದ್ಯ ತೀವ್ರ ಕುತೂಹಲ ಮೂಡಿಸಿದೆ.

********

ಬ್ರಿಟನ್ ಮೂಲದ ರಕ್ಷಣಾ ದಲ್ಲಾಳಿ ಸಂಜಯ್ ಭಂಡಾರಿ ಅವರೊಂದಿಗೆ ನಡೆಸಿದ್ದಾರೆ ಎನ್ನಲಾದ ಅಕ್ರಮ ಹಣಕಾಸು ವ್ಯವಹಾರಗಳಿಗೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕ ರಾಬರ್ಟ್ ವಾದ್ರಾ ಅವರ ಪ್ರಕರಣದ ವಿಚಾರಣೆ ದೆಹಲಿ ಹೈಕೋರ್ಟ್‌ನಲ್ಲಿ ಇಂದು ನಡೆಯುವ ನಿರೀಕ್ಷೆ ಇದೆ. ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾ ಗಾಂಧಿ ಅವರ ಅಳಿಯ ರಾಬರ್ಟ್ ವಾದ್ರಾ ನಡೆಸಿದ್ದಾರೆ ಎನ್ನಲಾದ ನಿಯಮಬಾಹಿರ ಹಣಕಾಸು ವಹಿವಾಟುಗಳಿಗೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಇಂದು ನ್ಯಾಯಾಲಯದಲ್ಲಿ ವಾದ ಮಂಡಿಸುವ ಸಾಧ್ಯತೆ ಇದೆ.

****END****